## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 464 |
| ಸದಸ್ಯರ ಹೆಸರು | : ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : 22.12.2022 |
| ಉತ್ತರಿಸುವ ಸಚಿವರು | : ಜಲ ಸಂಪನ್ಮೂಲ ಸಚಿವರು |

| ಕ್ರ ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಆಲಮಟ್ಟಿ ಹಿನ್ನೀರಿನಿಂದ ಒಟ್ಟು ಎಷ್ಟು ಗ್ರಾಮಗಳು ಮುಳುಗಡೆಯಾಗಿ ಸ್ಥಳಾಂತರಗೊಂಡಿವೆ; ಆ ಎಲ್ಲಾ ಗ್ರಾಮಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ; (ಒದಗಿಸಿದ್ದಲ್ಲಿ, ಸಂಪೂರ್ಣ ಮಾಹಿತಿಯೊಂದಿಗೆ ವಿವರ ನೀಡುವುದು) | ಆಲಮಟ್ಟಿ ಜಲಾಶಯದ ಹಿನ್ನೀರಿನಲ್ಲಿ 136 ಗ್ರಾಮಗಳು ಮುಳುಗಡೆಯಾಗಿದ್ದು, ಈ ಗ್ರಾಮಗಳಿಗೆ 106 ಪುನರ್‌ವಸತಿ ಕೇಂದ್ರಗಳನ್ನು ನಿರ್ಮಿಸಿ, ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆ. |
| ಆ) | ಸುಮಾರು 20 ವರ್ಷಗಳಿಂದ ಅನೇಕ ಪುನರ್ವಸತಿ ಕೇಂದ್ರಗಳಲ್ಲಿ ಸ್ಮಶಾನಕ್ಕೆ ಜಾಗ ನೀಡಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಎಷ್ಟು ಪುನರ್ವಸತಿ ಕೇಂದ್ರಗಳಲ್ಲಿ ಸ್ಮಶಾನಕ್ಕೆ ಜಾಗ ನೀಡುವುದು ಬಾಕಿ ಇದೆ; ಅಂತಹ ಪುನರ್ವಸತಿ ಕೇಂದ್ರಗಳಿಗೆ ಯಾವ ಕಾಲಮಿತಿಯೊಳಗೆ ಸ್ಮಶಾನಕ್ಕೆ ಜಾಗ ಒದಗಿಸುವುದು; (ವಿವರಗಳನ್ನು ಒದಗಿಸುವುದು) | ಕೃಷ್ಣಾ ಮೇಲ್ದಂಡೆ ಯೋಜನೆಯಡಿ ಮುಳುಗಡೆಯಾಗಿರುವ ಗ್ರಾಮಗಳಿಗೆ ನಿರ್ಮಿಸಲಾದ ಒಟ್ಟು 102 ಪುನರ್‌ವಸತಿ ಕೇಂದ್ರಗಳಲ್ಲಿ ಸ್ಮಶಾನ ಜಾಗ ನೀಡಲಾಗಿದ್ದು, 04 ಪುನರ್‌ವಸತಿ ಕೇಂದ್ರಗಳಲ್ಲಿ ಸ್ಮಶಾನ ಜಾಗವನ್ನು ನೀಡುವ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. |
| ಇ) | ಪುನರ್ವಸತಿ ಕೇಂದ್ರಗಳಲ್ಲಿ ಸಂತ್ರಸ್ಥ ಕುಟುಂಬಗಳಿಗೆ ಬೇಕಾಗುವಷ್ಟು ನಿವೇಶನ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇಂತಹ ಅನೇಕ ಗ್ರಾಮಗಳಿಗೆ ಯಾವ ಕಾಲಮಿತಿಯಲ್ಲಿ ನಿವೇಶನ ಒದಗಿಸಲಾಗುವುದು; (ಮಾಹಿತಿ ನೀಡುವುದು) | ಕೃಷ್ಣಾ ಮೇಲ್ದಡೆ ಯೋಜನೆಯಡಿ ನಿರ್ಮಿಸಲಾದ ಪುನರ್‌ವಸತಿ ಕೇಂದ್ರಗಳಲ್ಲಿ ಮುಳುಗಡೆಯಾಗುವ ಸಂತ್ರಸ್ಥ ಕುಟುಂಬಗಳಿಗೆ ಮುಳುಗಡೆಯಾಗುವ ಸಂದರ್ಭದಲ್ಲಿಯ ಸಂತ್ರಸ್ಥರ ಅನುಗುಣವಾಗಿ ಮೂರು ಪಟ್ಟು ಆಯಾ ಗ್ರಾಮವಾರು ನಿವೇಶನಗಳನ್ನು ಪುನರ್‌ವಸತಿ ಕೇಂದ್ರಗಳಲ್ಲಿ ನಿರ್ಮಿಸಲಾಗಿದ್ದು, ಅಲ್ಲದೇ ಭವಿಷ್ಯತ್ತಿಗಾಗಿ ಹಾಗೂ ಮೂಲಭೂತ ಸೌಕರ್ಯಕ್ಕಾಗಿ ಪುನರ್‌ವಸತಿ ಕೇಂದ್ರಗಳಲ್ಲಿ ಜಾಗೆಯನ್ನು ಮೀಸಲಿಡಲಾಗಿದೆ. |
| ಈ) | ಪುನರ್ವಸತಿ ಕೇಂದ್ರಗಳಲ್ಲಿ ಸಂತ್ರಸ್ಥ ಕುಟುಂಬದವರು ಬಯಸಿದ್ದಲ್ಲಿ ಹೆಚ್ಚುವರಿ ನಿವೇಶನವನ್ನು ಬೆಲೆ ಆಧಾರದ ಮೇಲೆ ವಿತರಿಸಲು ಸರ್ಕಾರಕ್ಕಿರುವ ಅಡಚಣೆ ಏನು; | ಕೃಷ್ಣಾ ಮೇಲ್ದಂಡೆ ಯೋಜನೆಯಡಿ ಮುಳುಗಡೆ ಸಂತ್ರಸ್ಥರಿಗೆ ಅನುಕೂಲವಾಗುವಂತೆ, ಆದೇಶ ಸಂಖ್ಯೆ:ಮವ್ಯ:ಪುಪು: ಸಿಡಬ್ಲೂಡಿ:309:2014-15 ದಿನಾಂಕ 01.12.2014 ರಿಂದ ಜಾರಿಗೆ ಬರುವಂತೆ ಒಂದು ಪುನರ್‌ವಸತಿ ಕೇಂದ್ರದಿಂದ ಇನ್ನೊಂದು ಪುನರ್‌ವಸತಿ ಕೇಂದ್ರಕ್ಕೆ ಹೆಚ್ಚುವರಿ ನಿವೇಶನವನ್ನು ಬೆಲೆ ಆಧಾರದ ಮೇಲೆ ನೀಡುವುದನ್ನು ನಿರ್ಬಂಧಿಸಲಾಗಿದೆ ಹಾಗೂ ಪುನರ್‌ವಸತಿ ಕೇಂದ್ರಗಳನ್ನು ಈಗಾಗಲೇ ಸ್ಥಳೀಯ ಸಂಸ್ಥೆಗಳಿಗೆ ಹಸ್ತಾಂತರಿಸಲಾಗಿದೆ. |
| ಉ) | ಸಂಘ, ಸಂಸ್ಥೆಗಳಿಗೆ, ಶಾಲಾ-ಕಾಲೇಜುಗಳಿಗೆ, ಆಸ್ಪತ್ರೆಗಳಿಗೆ ಹಾಗೂ ವಸತಿ ನಿಲಯಗಳಿಗೆ ಉಚಿತವಾಗಿ ನಿವೇಶನ ನೀಡಲು ಸರ್ಕಾರದ ಕ್ರಮವೇನು? (ಸಂಪೂರ್ಣ ಮಾಹಿತಿ ನೀಡುವುದು) | ಗ್ರಾಮದಲ್ಲಿ ಮುಳುಗಡೆಯಾಗಿ ಪರಿಹಾರಧನ ಪಡೆದ ಸಂಘ, ಸಂಸ್ಥೆಗಳಿಗೆ, ಶಾಲಾ-ಕಾಲೇಜುಗಳಿಗೆ, ಆಸ್ಪತ್ರೆಗಳಿಗೆ ಹಾಗೂ ವಸತಿ ನಿಲಯಗಳಿಗೆ ಉಚಿತವಾಗಿ ನಿವೇಶನ ನೀಡಲು ಕ್ರಮವಹಿಸಲಾಗಿದೆ. |

ಸಂಖ್ಯೆ:ಜಸಂಇ 129 ಡಬ್ಲ್ಯೂಬಿಎಂ 2022

(ಗೋವಿಂದ ಎಂ.ಕಾರಜೋಳ)
ಜಲ ಸಂಪನ್ಮೂಲ ಸಚಿವರು